ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಜೈವಿಕ ವಲಯ ಪಶ್ಚಿಮ ಘಟ್ಟಗಳ ರಕ್ಷಣೆ ಹಾಗೂ ನಿರ್ವಹಣೆ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) -

37 (341) ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕರ್ನಾಟಕದ ಅತ್ಯಂತ ಸೂಕ್ಷ್ಮ ಜೈವಿಕ ವಲಯವಾದ ಪಶ್ಚಿಮಘಟ್ಟಗಳ ರಕ್ಷಣೆ ಹಾಗೂ ನಿರ್ವಹಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಅಭಯಾರಣ್ಯಗಳು ಹಾಗೂ ಸಂರಕ್ಷಿತಾರಣ್ಯಗಳ ಉಳಿವಿಗೆ ಸರ್ಕಾರ ಯಾವ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಅರಣ್ಯ ಇಲಾಖೆಯಲ್ಲಿ ಇನ್ನೂ ಬಾಕಿ ಇರುವ ಫಾರೆಸ್ಟ್ ಗಾರ್ಡ್, ವಾಚರ್ ಹಾಗೂ ಇನ್ನುಳಿದ ಅರಣ್ಯ ಸಂರಕ್ಷಕರ ನೇಮಕಾತಿ ಪ್ರಕ್ರಿಯೆ ಸದ್ಯ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಈ) ಕರ್ನಾಟಕದ ದಟ್ಟ ಅರಣ್ಯಗಳಾದ ಬಂಡೀಪುರ, ನಾಗರಹೊಳೆ, ದಾಂಡೇಲಿ ಮುಂತಾದ ಕಡೆ ವನ್ಯಜೀವಿಗಳ ಚಿಕಿತ್ಸೆಗೆ ಸುಸಜ್ಜಿತ ವೈದ್ಯಕೀಯ ಘಟಕ ಸ್ಥಾಪನೆಯ ಬಗ್ಗೆ ಸರ್ಕಾರ ಚಿಂತಿಸಿದೆಯೇ ; (ಮಾಹಿತಿ ನೀಡುವುದು)

(ಉ) ರಾಜ್ಯದ ನಾನಾ ಪ್ರದೇಶಗಳ ಕಿರು ಅರಣ್ಯಗಳು ಹಾಗೂ ಸಾಮಾಜಿಕ ಅರಣ್ಯಗಳ ನಿರ್ಮಾಣ, ನಿರ್ವಹಣೆ ಹಾಗೂ ಸದ್ಯದ ಸ್ಥಿತಿಗತಿಗಳೇನು ? (ವಿವರ ನೀಡುವುದು)